ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಸೋಮವಾರ, ದಿನಾಂಕ: 15ನೇ ಜುಲೈ, 2019

ಕಬ್ಬನ್ ಪಾರ್ಕ್‌ನಲ್ಲಿನ ಅವ್ಯವಸ್ಥೆಯ ಬಗ್ಗೆ

ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

6 (122) ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಬೆಂಗಳೂರಿನ ಮುಖ್ಯ ಉದ್ಯಾನವನಗಳಲ್ಲೊಂದಾದ ಕಬ್ಬನ್ ಪಾರ್ಕ್‌ನಲ್ಲಿ ವಾಯುವಿಹಾರಕ್ಕೆಂದು ಬರುವ ಸಾರ್ವಜನಿಕರು ಹಾಗೂ ಹಿರಿಯ ನಾಗರೀಕರಿಗೆ ಶೌಚಾಲಯ ಇಲ್ಲದಿರುವುದರಿಂದ ಜನರು ಎಲ್ಲೆಂದರಲ್ಲಿ ಮೂತ್ರ ವಿಸರ್ಜನೆ ಮಾಡುತ್ತಿರುವುದರಿಂದ ಪರಿಸರದ ಸ್ವಚ್ಛತೆ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಉದ್ಯಾನವನಕ್ಕೆ ಬರುವ ಸಾರ್ವಜನಿಕರು ಇಲ್ಲಿನ ಸರ್ಕಾರಿ ಕೇಂದ್ರ ಗ್ರಂಥಾಲಯದಲ್ಲಿನ ಶೌಚಾಲಯವನ್ನು ಅವಲಂಬಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಬ್ಬನ್ ಪಾರ್ಕ್‌ನಲ್ಲಿ ಶೌಚಾಲಯವನ್ನು ನಿರ್ಮಿಸಲು ಇಲಾಖೆಯು ಕೈಗೊಂಡ ಕ್ರಮವೇನು ? (ವಿವರ ನೀಡುವುದು)